ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

13

ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 23/2/21

# ಒಕ್ಕಲಿಗರಿಗೂ ಮೀಸಲು ಹೆಚ್ಚಿಸಿ

23/2/21

**ಬೆಂಗಳೂರು:** ಒಕ್ಕಲಿಗ ಸಮುದಾಯಕ್ಕೆ ಮೀಸಲಾತಿ ಪ್ರಮಾಣ ಹೆಚ್ಚಳ, ಒಕ್ಕಲಿಗರ ಅಭಿವೃದ್ಧಿ ಪ್ರಾಧಿಕಾರ ರಚನೆ ಮಾಡಿ 1 ಸಾವಿರ ಕೋಟಿ ರೂ. ಮೀಸಲಿಡುವಂತೆ ರಾಜ್ಯ ಒಕ್ಕಲಿಗರ ಮೀಸಲಾತಿ ಹೋರಾಟ ಸಮಿತಿ ಸಿಎಂ ಯಡಿಯೂರಪ್ಪ ಅವರಿಗೆ ಮನವಿ ಮಾಡಿದೆ.

ಆದಿಚುಂಚನಗಿರಿ ಮಠದಲ್ಲಿ ಆದಿಚುಂಚನಗಿರಿ ಪೀಠಾಧ್ಯಕ್ಷ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಮತ್ತು ಪಟ್ಟನಾಯಕನ ಹಳ್ಳಿ ಸ್ಫಟಿಕ ಪುರಿ ಮಠಾಧೀಶ ಶ್ರೀ ನಂಜಾವಧೂತ ಸ್ವಾಮೀಜಿ ಮತ್ತು ಒಕ್ಕಲಿಗ ಸಮುದಾಯದ ಮುಖಂಡರು ಮೀಸಲಾತಿ ಕುರಿತು ಸಭೆ ನಡೆಸಿ, ಸರ್ಕಾರಕ್ಕೆ ಮನವಿ ಸಲ್ಲಿಸಿದ್ದಾರೆ.

**ಸ್ವಾಮೀಜಿಗಳ ನೇತೃತ್ವದಲ್ಲಿ ಸರ್ಕಾರಕ್ಕೆ ಮನವಿ**

ಒಕ್ಕಲಿಗರ ಮೀಸಲಾತಿ ಹೆಚ್ಚಳ, ಒಕ್ಕಲಿಗ ಅಭಿವೃದ್ಧಿ ಪ್ರಾಧಿಕಾರ ರಚನೆ ಮತ್ತು ಒಕ್ಕಲಿಗ ಸಮುದಾಯದ ಎಲ್ಲ 115 ಪಂಗಡಗಳನ್ನು ಹಿಂದುಳಿದ ವರ್ಗಗಳ ಪಟ್ಟಿಗೆ ಸೇರ್ಪಡೆ ಮಾಡಬೇಕು. ಒಕ್ಕಲಿಗ ಸಮುದಾಯಕ್ಕೇ ಪ್ರವರ್ಗ 3ಎ ಅಡಿಯಲ್ಲಿ ಶೇ.4 ರಷ್ಟು ಮೀಸಲಾತಿ ಸಿಗುತ್ತಿದೆ. ಈ ಪ್ರವರ್ಗಕ್ಕೆ ಒಕ್ಕಲಿಗರೇತರ ಜಾತಿಗಳನ್ನು ಸೇರ್ಪಡೆ ಮಾಡಲಾಗಿದೆ. ಅಲ್ಲದೆ ಒಕ್ಕಲಿಗ ಜನ ಸಂಖ್ಯೆ ಶೇ.17 ರಷ್ಟಿದ್ದು ಮೀಸಲಾತಿಯನ್ನು 10ಕ್ಕೆ ಹೆಚ್ಚಳ ಮಾಡಲು ಬೇಡಿಕೆ ಸಲ್ಲಿಸಲಾಗಿದೆ. ಹಿಂದಿನ ಸರಕಾರ ನಡೆಸಿದ್ದ ಜಾತಿ ಸಮೀಕ್ಷೆಯನ್ನು ಒಪ್ಪಿಕೊಳ್ಳಬಾರದು ಎಂದೂ ಮನವಿ ಮಾಡಲಾಗಿದೆ.

ಮನವಿ ಸಲ್ಲಿಸಿ ಮಾತನಾಡಿದ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ, ಒಕ್ಕಲಿಗ ಸಮುದಾಯಕ್ಕೆ ತ್ವರಿತವಾಗಿ ಪ್ರಾಧಿಕಾರ ರಚನೆ ಮಾಡಲೇಬೇಕು ಮತ್ತು ಕನಿಷ್ಠ 1000 ಕೋಟಿ ರೂ. ಅನುದಾನ ಒದಗಿಸಬೇಕು ಎಂದು ಸರಕಾರವನ್ನು ಒತ್ತಾಯಿಸಿದರು. ಶ್ರೀ ನಂಜಾವಧೂತ ಸ್ವಾಮೀಜಿ ಮಾತನಾಡಿ, ಕೃಷಿಯನ್ನೇ ನಂಬಿಕೊಂಡ ಒಕ್ಕಲಿಗ ಇಂದು ಅತಂತ್ರನಾಗಿದ್ದಾನೆ. ಆದ್ದರಿಂದ ಜನಸಂಖ್ಯೆಗನುಗುಣವಾಗಿ ಮೀಸಲಾತಿ ಹೆಚ್ಚಳ ಮಾಡಬೇಕು. ನಿಗಮ ರಚನೆ ಆಗಲೇ ಬೇಕು ಎಂದು ಒತ್ತಾಯಿಸಿದರು.

ಸರಕಾರದ ಪರವಾಗಿ ಉಪಮುಖ್ಯಮಂತ್ರಿ ಡಾ. ಸಿ.ಎನ್. ಅಶ್ವತ್ಥ ನಾರಾಯಣ, ಸಚಿವರಾದ ಅಶೋಕ್ ಮತ್ತು ನಾರಾಯಣ ಗೌಡ ಮನವಿ ಸ್ವೀಕರಿಸಿದರು. ಶಾಸಕರಾದ ಎಸ್.ಆರ್. ವಿಶ್ವನಾಥ್, ಸತೀಶ್ ರೆಡ್ಡಿ ಅ. ದೇವೇಗೌಡ, ಪುಟ್ಟಣ್ಣ ಸೇರಿ ಹಲವರು ಉಪಸ್ಥಿತರಿದ್ದರು.



ಆದಿಚುಂಚನಗಿರಿ ಪೀಠಾಧ್ಯಕ್ಷ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಹಾಗೂ ಇತರ ಒಕ್ಕಲಿಗ ಸಮುದಾಯದ ಮುಖಂಡರು ಸರ್ಕಾರಕ್ಕೆ ಮನವಿ ಸಲ್ಲಿಸಿದ್ದರು.

> ಒಕ್ಕಲಿಗ ಸಮುದಾಯದ ಬೇಡಿಕೆಗಳ ಕುರಿತು ಮುಖ್ಯಮಂತ್ರಿಗಳ ಜೊತೆ ಚರ್ಚಿಸಲಾಗುವುದು. ಒಕ್ಕಲಿಗ ಸಮುದಾಯಕ್ಕೆ ನಿಗಮ ರಚನೆಗೆ ಸರ್ಕಾರ ಬದ್ಧವಾಗಿದೆ.
>
> • ಆರ್. ಅಶೋಕ್, ಕಂದಾಯ ಸಚಿವ